ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

9

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 07/09/2020

# ಸ್ವಾಮೀಜಿ ನಿಧನಕ್ಕೆ ಗಣ್ಯರ ಸಂತಾಪ

ಬೆಂಗಳೂರು: ಎಡನೀರು ಮಠಾಧೀಶರಾದ ಕೇಶವಾನಂದ ಭಾರತೀ ಸ್ವಾಮೀಜಿಗಳು ವಿಧಿವಶರಾಗಿರುವುದಕ್ಕೆ ಸಿಎಂ ಬಿ.ಎಸ್.ಯಡಿಯೂರಪ್ಪ ಸೇರಿ ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

'ಕಾಸರಗೋಡಿನ ಎಡನೀರು ಮಠದ ತೋಟಕಾಚಾರ್ಯ ಪರಂಪರೆಯ ಪೂಜ್ಯ ಕೇಶವಾನಂದ ಭಾರತೀ ತೀರ್ಥ ಸ್ವಾಮೀಜಿಯವರು ಕೃಷ್ಣೈಕ್ಯರಾದ ಸುದ್ದಿ ತಿಳಿದು ದುಃಖವಾಗಿದೆ. ಪೂಜ್ಯ ಶ್ರೀಗಳಿಗೆ ನನ್ನ ಗೌರವಪೂರ್ವಕ ಶ್ರದ್ಧಾನಮನಗಳನ್ನು ಸಲ್ಲಿಸುತ್ತಿದ್ದೇನೆ. ಓಂ ಶಾಂತಿ' ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸಂತಾಪ ಸಲ್ಲಿಸಿ ಟ್ವೀಟ್ ಮಾಡಿದ್ದಾರೆ.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಸಚಿವ ರಮೇಶ್ ಜಾರಕಿಹೊಳಿ, ರಾಜ್ಯ ಬಿಜೆಪಿ ಅಧ್ಯಕ್ಷರಾದ ಸಂಸದ ನಳಿನ್ ಕುಮಾರ್ ಕಟೀಲ್ ಅವರು ಸ್ವಾಮೀಜಿಗಳ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.